# ಪಂಜೆ ಮಂಗೇಶರಾಯರ ಸಾಹಿತ್ಯ ಕೃಷಿ ಅಗಾಧವಾದುದು : ಚಿದಾನಂದ ಸಾಲಿ




**ವಾರ್ತಾಲೋಕ ವಾರ್ತೆ**

ಬಳ್ಳಾರಿ ಫೆ 23 : ಶಿಕ್ಷಕರಾಗಿದ್ದ ಪಂಜೆ ಮಂಗೇಶರಾಯರು ಸಾಹಿತ್ಯದ ವಿವಿಧ ಕ್ಷೇತ್ರಗಳಲ್ಲಿ ಪ್ರೌಢಿಮೆಯನ್ನು ಮೆರೆದು ಸಾಹಿತ್ಯ ಕ್ಷೇತ್ರಕ್ಕೆ ಅಗಾಧವಾದ ಕೊಡುಗೆಯನ್ನು ನೀಡಿದ್ದಾರೆ ಎಂದು ಕೇಂದ್ರ ಸಾಹಿತ್ಯ ಅಕಾಡೆಮಿಯ ಕನ್ನಡ ಸಲಹಾ ಸಮಿತಿಯ ಸದಸ್ಯರಾದ ಚಿದಾನಂದ ಸಾಲಿ ಅಭಿಪ್ರಾಯ ಪಟ್ಟರು.ಕೇಂದ್ರ ಸಾಹಿತ್ಯ ಅಕಾಡೆಮಿ ನವದೆಹಲಿ ಹಾಗೂ ಬಳ್ಳಾರಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಸಹಯೋಗದೊಂದಿಗೆ ಬಳ್ಳಾರಿಯ ಕನ್ನಡ ಭವನದಲ್ಲಿ ನಿನ್ನೆ ನಡೆದ ಪಂಜೆ ಮಂಗೇಶರಾಯರ 150ನೇ ಜನ್ಮದಿನಾಚರಣೆಯ ಅಂಗವಾಗಿ ನಡೆದ ವಿಶೇಷ ವಿಚಾರ ಸಂಕಿರಣದಲ್ಲಿ ಭಾಗವಹಿಸಿ ಮಾತನಾಡಿ, ಕೇಂದ್ರ ಸಾಹಿತ್ಯ ಅಕಾಡೆಮಿಯಿಂದ ಕರ್ನಾಟಕದ 31 ಜಿಲ್ಲೆಗಳಲ್ಲಿಯೂ ವೈವಿಧ್ಯಮಯ ಕನ್ನಡ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಸಾಲಿ ತಿಳಿಸಿದರು. ಪಂಜೆ ಮಂಗೇಶರಾಯರ ಬದುಕು ಮತ್ತು ಬರಹ ಕುರಿತು ಡಾ. ಪ್ರಜ್ಞಾ ಮತ್ತಿಹಳ್ಳಿ ವಿಷಯ ಮಂಡಿಸಿದರು. ಡಾ. ತಾರಿಣಿ ಶುಭದಾಯಿನಿ ಅವರು ಪಂಜೆಯವರ ಹೊಸಗನ್ನಡ ಸಾಹಿತ್ಯದ ಕೊಡುಗೆಯನ್ನು ಸ್ಮರಿಸಿದರು. ಮಕ್ಕಳ ಸಾಹಿತಿಗಳಾದ ಡಾ. ಶಿವಲಿಂಗಪ್ಪ ಕೆ ಹಂದಿಹಾಳು ಅವರು ಪಂಜೆ ಮಂಗೇಶರಾಯರ ಶಿಶು ಸಾಹಿತ್ಯದ ತಾತ್ವಿಕ ನೆಲೆಗಳನ್ನು ಕುರಿತು ಮಾತನಾಡಿದರುಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲಾಧ್ಯಕ್ಷ ಡಾ. ನಿಷ್ಠಿ ರುದ್ರಪ್ಪ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಬಳ್ಳಾರಿ ವೈದ್ಯಕೀಯ ಮಹಾವಿದ್ಯಾಲಯದ ನೇತ್ರ ಚಿಕಿತ್ಸಾ ವಿಭಾಗದ ಮುಖ್ಯಸ್ಥರಾದ ಡಾ. ಪರಸಪ್ಪ ಬಂದ್ರಕಳ್ಳಿ ಮತ್ತು ಸಾಹಿತಿಗಳಾದ ದಸ್ತಗಿರಿ ಸಾಬ್ ದಿನ್ನಿ ವೇದಿಕೆಯಲ್ಲಿ ಉಪಸ್ಥಿತರಿದ್ದರು. ಪಂಜೆ ಮಂಗೇಶರಾಯರ ಕುರಿತಾಗಿ ಸಭಿಕರು ಸಂವಾದ ನಡೆಸಿದರು.

ಎನ್ ಬಸವರಾಜ್ ಪ್ರಾರ್ಥನೆ ಸಲ್ಲಿಸಿದರು. ಡಾ. ನಾಗರಾಜ್ ಬಸರಕೋಡು ಕಾರ್ಯಕ್ರಮ ನಿರೂಪಿಸಿದರು.